ಜೆಎಸ್‌ಎಸ್ ಮಹಾವಿದ್ಯಾಪೀಠ

# ಜೆಎಸ್‌ಎಸ್ ಮಹಿಳಾ ಕಾಲೇಜು

ಮೈಸೂರು ವಿಶ್ವವಿದ್ಯಾನಿಲಯಕ್ಕೆ ಸಂಯೋಜಿತ ಮತ್ತು ನ್ಯಾಕ್ ನಿಂದ 'ಬಿ' ಮಾನ್ಯತೆ ಪಡೆದಿದೆ

**ಕೊಳ್ಳೇಗಾಲ – 571 440, ಚಾಮರಾಜನಗರ ಜಿಲ್ಲೆ**

☎: 08224-252149 🖷: 08224-256051 Email: jsscwk@gmail.com www.jsscwkgl.org

**ಪ್ರಕಟಣೆ ಕೃಪೆಗಾಗಿ**

## ಜೆಎಸ್‌ಎಸ್ ವಿದ್ಯಾರ್ಥಿನಿಯರಿಂದ ಹುತಾತ್ಮರಿಗೆ ಶ್ರದ್ಧಾಂಜಲಿ

ಕೊಳ್ಳೇಗಾಲ:15.2.19: ಇಲ್ಲಿನ ಜೆಎಸ್‌ಎಸ್ ಮಹಿಳಾ ಕಾಲೇಜಿನಲ್ಲಿ ನಿನ್ನೆ ಕಾಶ್ಮೀರಿ ಉಗ್ರನೊಬ್ಬನ ಆತ್ಮಾಹುತಿ ಬಾಂಬ್ ದಾಳಿಗೆ 40ಕ್ಕೂ ಹೆಚ್ಚು ಸಿ.ಆರ್.ಪಿ.ಎಫ್. ಯೋಧರು ಹುತಾತ್ಮರಾದ ಹಿನ್ನಲೆಯಲ್ಲಿ ವಿದ್ಯಾರ್ಥಿನಿಯರು ಹಾಗೂ ಅಧ್ಯಾಪಕರು ಒಂದು ನಿಮಿಷ ಮೌನಾಚರಣೆ ನಡೆಸಿ ಹುತಾತ್ಮರಿಗೆ ಶ್ರದ್ಧಾಂಜಲಿ ಅರ್ಪಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಪ್ರಾಚಾರ್ಯ ಪ್ರೊ. ಉಮೇಶ ನಾವೆಲ್ಲಾ ದೇಶದೊಳಗೆ ನೆಮ್ಮದಿಯಿಂದ ಜೀವನ ನಡೆಸುತ್ತಿದ್ದೇವೆಂದರೆ ಅದಕ್ಕೆ ಕಾರಣ ಸದಾ ದೇಶದ ಗಡಿಯಲ್ಲಿ ಅಪಾರ ಕಷ್ಟ ಕಾರ್ಪಣ್ಯಗಳನ್ನು ಸಹಿಸಿಕೊಂಡೇ ನಮ್ಮನ್ನು ಕಾಯುತ್ತಿರುವ ಸೈನಿಕರು. ದೇಶದ ಪ್ರತಿಯೊಬ್ಬ ಪ್ರಜೆಯೂ ಯೋಧರ ಸೇವೆಯನ್ನು ಸ್ಮರಿಸಲೇಬೇಕು. ಯೋಧರು ಹಾಗೂ ಅನ್ನದಾತರಾದ ರೈತಾಪಿ ವರ್ಗ ರಾಷ್ಟ್ರದ ಉಸಿರು, ಹೃದಯ ಎಲ್ಲ. ಅವರಿಲ್ಲದೆ ಯಾರೂ ಇಲ್ಲ, ನಿಜಾರ್ಥದಲ್ಲಿ ನಮ್ಮೆಲ್ಲರ ಸರ್ವಸ್ವವೇ ಅವರು. ಆದರೆ ನಿನ್ನೆ ನಡೆದ ಉಗ್ರನ ದಾಳಿಯಲ್ಲಿ ನಾವು ಕಳೆದುಕೊಂಡ ಅಮೂಲ್ಯ ಯೋಧರತ್ನಗಳ ಬಂಧು ಮಿತ್ರರಿಗೆ ಆಗಿರುವ ನೋವು ಮತ್ತು ದುಃಖ ಭರಿಸುವ ಶಕ್ತಿಯನ್ನು ದೇವರು ಕರುಣಿಸಲಿ ಮತ್ತು ಮೃತರ ಆತ್ಮಕ್ಕೆ ಶಾಂತಿ ಕರುಣಿಸಲಿ ಎಂದು ಪ್ರಾರ್ಥಿಸಿದರು.

